ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ. ಪ್ರತಾಪಸಿಂಹ ನಾಯಕ್ ಇವರ 330ನೇ ನಿಯಮದ ಮೇರೆಗೆ ಕೋರಿರುವ ವಿಷಯಕ್ಕೆ ಮಾನ್ಯ ಮುಖ್ಯಮಂತ್ರಿಯವರ ಉತ್ತರ.

ಪ್ರಶ್ನೆ:

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಗೆ ಸೇರಿ ಬಹುತೇಕ ಹುದ್ದೆಗಳು ದೀರ್ಘಕಾಲದಿಂದ ಖಾಲಿ ಉಳಿದಿದ್ದು, ಇಲಾಖೆಯ ಸೇವೆಗಳಲ್ಲಿ ಬಹಳಷ್ಟು ವ್ಯತ್ಯಯವಾಗಿದೆ. ಪಡಿತರ ವಿತರಣೆಗೆ ಸಂಬಂಧಿಸಿದಂತೆ ಹಂಚಿಕೆ ಪೂರ್ವೆಕೆ ಮಾಹಿತಿ ಸಂಗ್ರಹ, ಅಕ್ರಮ ತಡೆಗಟ್ಟುವಿಕೆ ಅನ್ನಭಾಗ್ಯದಲ್ಲಿನ ಅಕ್ಕಿ ಕಾಳ ಸಂತೆಯಲ್ಲಿ ಮಾರಾಟವಾಗುವುದನ್ನು ತಡೆಯುವುದು ಹಾಗೂ ಹೊಸ ಪಡಿತರ ಅರ್ಜಿಗಳ ಪರಿಶೀಲನೆ, ಮಂಜೂರು ಹಾಗೂ ವಿತರಣೆ ಮಾಡುವಲ್ಲಿ ಮಹತ್ತರ ಪಾತ್ರ ವಹಿಸುವಲ್ಲಿ ಸದರಿ ಹುದ್ದೆಗಳು ದೀರ್ಘ ಕಾಲದಿಂದ ಖಾಲಿ ಉಳಿದಿರುವುದರಿಂದ ಸಾರ್ವಜನಿಕರಿಗೆ ಸಾಕಷ್ಟು ತೊಂದರೆಯಾಗಿರುವ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

ಉತ್ತರ:

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ವಿವಿಧ ವೃಂದದ 44 ಹುದ್ದೆಗಳು ಖಾಲಿ ಇರುತ್ತವೆ. ಆದಾಗ್ಯೂ ಜಿಲ್ಲೆಗಳಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳಿಂದಲೇ ಇಲಾಖೆಯ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಾರ್ವಜನಿಕರಿಗೆ ತೊಂದರೆಯಾಗದಂತೆ ಇಲಾಖೆಯ ಸೇವೆಗಳನ್ನು ಒದಗಿಸಲಾಗುತ್ತಿದೆ ಹಾಗೂ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ವೃಂದದ 41 ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದಿಂದ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ. ಬೆರಳಚ್ಚುಗಾರರು, ವಾಹನ ಚಾಲಕರು ಹಾಗೂ ಗ್ರೂಪ್-ಡಿ ಹುದ್ದೆಗಳಿಗೆ ಎದುರಾಗಿ ಹೊರಗುತ್ತಿಗೆ ಆಧಾರದ ಮೇಲೆ ನೌಕರರನ್ನು ನೇಮಕಮಾಡಿಕೊಳ್ಳಲಾಗಿದೆ.

---

ಆನಾಸ 41 ಆಇಸೇ 2023 (ಇ-ಆಫೀಸ್)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ